# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ, ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮ,ಹಾಗೂ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮಗಳ ಲೆಕ್ಕಪತ್ರಗಳ ನಿರ್ವಹಣೆಯನ್ನು ಆಯುಕ್ತರ ಕಛೇರಿಯ ಸಿಬ್ಬಂದಿಯಿಂದ ನಿರ್ವಹಿಸುವ ಬಗ್ಗೆ.

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 18 ಬಿಸಿಎ 2021 ಬೆಂಗಳೂರು, ದಿನಾಂಕ: 07.07.2021.
2. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 187 ಬಿಸಿಎ 2021 ಬೆಂಗಳೂರು, ದಿನಾಂಕ: 20.04.2022.
3. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 134 ಬಿಸಿಎ 2021, ಬೆಂಗಳೂರು, ದಿನಾಂಕ: 26.07.2021

*********

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1) ರಿಂದ (3) ರ ಸರ್ಕಾರದ ಆದೇಶಗಳಲ್ಲಿ ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ, ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮಗಳ ಯೋಜನೆಗಳನ್ನು ಅನುಷ್ಠಾನಗೊಳಿಸಲು ಹಾಗೂ ದೈನಂದಿನ ಕಾರ್ಯನಿರ್ವಹಣೆಗಾಗಿ ಅವಶ್ಯಕವಿರುವ ಹುದ್ದೆಗಳನ್ನು ಸೃಜಿಸಿ ಆದೇಶಿಸಲಾಗಿದೆ. ಸದರಿ ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಿ, ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಕಾಲಾವಕಾಶದ ಅವಶ್ಯಕತೆ ಇರುತ್ತದೆ. ಪ್ರಸ್ತುತ ಲೆಕ್ಕಾಧಿಕಾರಿಗಳು ಹಾಗೂ ಲೆಕ್ಕಾಸಹಾಯಕರು/ಪ್ರಥಮ ದರ್ಜೆ ಸಹಾಯಕರ ಹುದ್ದೆಗಳೂ ಸಹ ಖಾಲಿ ಇರುವುದರಿಂದ ನಿಗಮಗಳ ಲೆಕ್ಕಪತ್ರಗಳನ್ನು ವ್ಯವಸ್ಥಿತ ರೀತಿಯಲ್ಲಿ ನಿರ್ವಹಿಸುವುದು ಕಷ್ಟಕರವಾಗಿರುತ್ತದೆ. ಸದರಿ ಹುದ್ದೆಗಳನ್ನು ಖಾಯಂ ಆಗಿ ಭರ್ತಿ ಮಾಡಿಕೊಳ್ಳುವವರೆಗೆ ನಿಗಮಗಳ ಆಂತರಿಕ ಲೆಕ್ಕಪತ್ರಗಳ ವ್ಯವಸ್ಥಿತ ನಿರ್ವಹಣೆಯನ್ನು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಲೆಕ್ಕಪತ್ರ ಶಾಖೆಯ ಅಧಿಕಾರಿ/ಸಿಬ್ಬಂದಿಗಳು ನಿರ್ವಹಿಸುವುದು ಸೂಕ್ತವೆಂದು ಭಾವಿಸಿ, ಅದರಂತೆ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 387 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ:14-09-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ, ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮ,ಹಾಗೂ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮಗಳಲ್ಲಿ ಸೃಜಿಸಲಾದ ಹುದ್ದೆಗಳನ್ನು ನಿಯಮಾನುಸಾರ ಖಾಯಂ ಆಗಿ ಭರ್ತಿ ಮಾಡಿಕೊಳ್ಳುವವರೆಗೆ ನಿಗಮಗಳ ಲೆಕ್ಕಪತ್ರಗಳ ನಿರ್ವಹಣೆಯನ್ನು ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಲೆಕ್ಕಪತ್ರ ಶಾಖೆಯ ಅಧಿಕಾರಿ/ಸಿಬ್ಬಂದಿಗಳು ಆಯುಕ್ತರ ಕಛೇರಿಯ ಕರ್ತವ್ಯದ ಜೊತೆಗೆ ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ, ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮ, ಹಾಗೂ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮಗಳ ಲೆಕ್ಕಪತ್ರಗಳ ನಿರ್ವಹಣೆಯ ಜವಾಬ್ದಾರಿಯನ್ನು ನಿರ್ವಹಿಸುವಂತೆ ಈ ಮೂಲಕ ಆದೇಶಿಸಿದೆ.

...2

ಈ ಬಗ್ಗೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ತಮ್ಮ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಲೆಕ್ಕಪತ್ರ ಶಾಖೆಯ ಅಧಿಕಾರಿ/ಸಿಬ್ಬಂದಿಗಳು ಆಯುಕ್ತರ ಕಛೇರಿಯ ಲೆಕ್ಕಪತ್ರ ಶಾಖೆಯ ನಿರ್ವಹಣೆಯ ಜೊತೆಗೆ ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ, ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮ, ಹಾಗೂ ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮಗಳ ಲೆಕ್ಕಪತ್ರಗಳ ನಿರ್ವಹಣೆಯ ಜವಾಬ್ದಾರಿಯನ್ನು ನಿರ್ವಹಿಸಲು ಅಗತ್ಯ, ಸೂಕ್ತ ವ್ಯವಸ್ಥೆಯನ್ನು ಮಾಡತಕ್ಕದ್ದು,

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 330 ವೆಚ್ಚ-3/2022 ದಿನಾಂಕ:04.06.2022 ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Sheenparveen 14/09/2022

(ಷಾಹೀನ್ ಪರ್ವೀನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

14/9

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮ,
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಒಕ್ಕಲಿಗ ಸಮುದಾಯಗಳ ಅಭಿವೃದ್ಧಿ ನಿಗಮ,
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮ
6. ಮುಖ್ಯ ಲೆಕ್ಕಾಧಿಕಾರಿಗಳು, ಲೆಕ್ಕಪತ್ರ ಶಾಖೆ, ಆಯುಕ್ತರ ಕಛೇರಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.

ಪ್ರತಿ ಮಾಹಿತಿಗಾಗಿ:-

1. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ ಬೆಂಗಳೂರು.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

********